# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಹೆಚ್ಚುವರಿ ನಿರ್ದೇಶಕರು(ನಗರ ಯೋಜನೆ) ರವರ ಕಛೇರಿ,ಮಹಾನಗರ ಪಾಲಿಕೆ,ಎನ್.ಆರ್. ವೃತ್ತ,ಬೆಂಗಳೂರು-02.**

ಸಂಖ್ಯೆ: ಜೆಡಿಟಿಪಿ (ದ)/ಪ್ರಾ.ಪ/ಸನಿ/41/2016-17 ದಿನಾಂಕ: 06-01-2017.

## ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಆಸ್ತಿ ಸಂಖ್ಯೆ 75/59/1, 3, 4, 5, 6,7, ಎಳೇನಹಳ್ಳಿ, ಬೇಗೂರು ಉಪವಿಭಾಗ, ವಾರ್ಡ್ ಸಂಖ್ಯೆ 192, ಬೆಂಗಳೂರು ಇಲ್ಲಿ ನಿರ್ಮಿಸಲಾಗುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD South/ 0320/14-15 ದಿನಾಂಕ: 04-01-2016.

2) ಅರ್ಜಿದಾರರ ಮನವಿ ದಿನಾಂಕ: 21-12-2016.

3) ಅಪರ ನಿರ್ದೇಶಕರು, ನಗರ ಯೋಜನೆ ರವರ ಆದೇಶ ದಿನಾಂಕ: 04-01-2017.

*****

ಎಳೇನಹಳ್ಳಿ, ಬೇಗೂರು ಉಪವಿಭಾಗ, ವಾರ್ಡ್ ಸಂಖ್ಯೆ 192 ರಲ್ಲಿರುವ ಆಸ್ತಿ ಸಂಖ್ಯೆ 75/59/1, 3, 4, 5, 6,7 ಇಲ್ಲಿ ನಿರ್ಮಿಸುತ್ತಿರುವ ತಳ+ನೆಲ+ಮೇಲಿನ 4 ಅಂತಸ್ತುಗಳ 148 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕಛೇರಿಯಿಂದ ಎಲ್.ಪಿ ಸಂಖ್ಯೆ: BBMP/Addl.Dir/JD South/ 0320/14-15 ದಿನಾಂಕ: 04-01-2016 ರಂದು ನಕ್ಷೆ ಮಂಜೂರಾತಿ ನೀಡಲಾಗಿದೆ. ವಸತಿ ಸಮುಚ್ಚಯ ಕಟ್ಟಡದ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ಕಟ್ಟಡದ ಸ್ಥಳವನ್ನು ದಿನಾಂಕ: 24-12-2016 ರಂದು ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರು ಮತ್ತು ಸಹಾಯಕ ಅಭಿಯಂತರರವರೊಂದಿಗೆ ಸ್ಥಳ ಪರಿಶೀಲಿಸಿದ್ದು, ವಲಯ ನಿಯಮಾವಳಿಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ಅಳವಡಿಸಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 1,68,000/- ಗಳನ್ನು ಅರ್ಜಿದಾರರು ರಸೀದಿ ಸಂಖ್ಯೆ: RE-ifms624-TP/000235 ದಿನಾಂಕ: 05-01-2017 ರಂದು ಭರಿಸಿದ್ದು, ಸಂದಾಯಿಸಿ ಕೊಳ್ಳಲಾಗಿದೆ. ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
4) ಉದ್ಯಾನವನ ಮತ್ತು ಬಯಲುಜಾಗದ ಶುಲ್ಕದ ಬಾಬ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಪಿಗೆ ಬದ್ಧರಾಗಿರುವುದಾಗಿ ನೀಡಿರುವ ಮುಚ್ಚಳಿಕೆ ಪತ್ರದಂತೆ ಷರತ್ತನ್ನು ಪಾಲಿಸತಕ್ಕದ್ದು.

6/1/17

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

6/1/17 6/1/17 6/1/17

ಗೆ
M/s. Vedant Developers
Rep by Tejas H.V, Sri. V. Ravindra & Krishnappa
# 75/59/1, 3, 4, 5, 6,7, ಎಳೇನಹಳ್ಳಿ,
ಬೇಗೂರು ಉಪವಿಭಾಗ, ವಾರ್ಡ್ ಸಂಖ್ಯೆ 192, ಬೆಂಗಳೂರು.